## ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2017 /1801 ದಿನಾಂಕ: 22-09-2017

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017, ಬೆಂಗಳೂರು ದಿನಾಂಕ:11-09-2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರದ ನಡವಳಿ

ವಿಷಯ:- 6ನೇ ರಾಜ್ಯ ವೇತನ ಆಯೋಗದ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:** 1. ದಿನಾಂಕ: 01-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.

2. ದಿನಾಂಕ: 29-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 33 ಎಸ್‌ಆರ್‌ಪಿ 2017(ಭಾ).

3. ಕಾರ್ಯದರ್ಶಿ, ಕರ್ನಾಟಕ 6ನೇ ರಾಜ್ಯ ವೇತನ ಆಯೋಗ ಇವರ ಪತ್ರ ಸಂಖ್ಯೆ: 6 ರಾವೇಆ/53/2017-18 ದಿನಾಂಕ: 06-09-2017.

10670

JD (Ad) / Reg (Ad) / PS

**ಪ್ರಸ್ತಾವನೆ:**

ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು, ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ: 01-06-2017ರ ಸರ್ಕಾರಿ ಆದೇಶದಲ್ಲಿ ಶ್ರೀ ಎಂ.ಆರ್.ಶ್ರೀನಿವಾಸಮೂರ್ತಿ, ಭಾ.ಆ.ಸೇ.(ನಿವೃತ್ತ) ಇವರ ಅಧ್ಯಕ್ಷತೆಯಲ್ಲಿ 6ನೇ ರಾಜ್ಯ ವೇತನ ಆಯೋಗವನ್ನು ರಚಿಸಿ, 04 ತಿಂಗಳ ಒಳಗಾಗಿ ವರದಿಯನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು.

ಈ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 29-06-2017ರ ಸರ್ಕಾರಿ ಆದೇಶದಲ್ಲಿ 6ನೇ ರಾಜ್ಯ ವೇತನ ಆಯೋಗಕ್ಕೆ ವಿವಿಧ ವೃಂದದ 40 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ.

ಆದರೆ, ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ, ಕಾರ್ಯದರ್ಶಿಗಳು, ಕರ್ನಾಟಕ 6ನೇ ರಾಜ್ಯ ವೇತನ ಆಯೋಗ ಇವರು, 'ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ, ವಿವಿಧ ವೃಂದಗಳ ವೇತನ ರಚನೆಗೆ ಸಂಬಂಧಿಸಿದ ಅಂಶಗಳು ಮತ್ತು ವಿಷಯಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ರಾಜ್ಯ ಮತ್ತು ಜಿಲ್ಲಾ ಮಟ್ಟಗಳಲ್ಲಿ ವಿವಿಧ ಇಲಾಖೆಗಳೊಂದಿಗೆ ಸಮಾಲೋಚನೆಯನ್ನು ಇನ್ನೂ ಪೂರ್ಣಗೊಳಿಸಿರುವುದಿಲ್ಲ. ಇದನ್ನು ಪೂರ್ಣಗೊಳಿಸಿದ ನಂತರ ಶಿಫಾರಸ್ಸನ್ನು ಅಂತಿಮಗೊಳಿಸಿ ವರದಿ ಸಲ್ಲಿಸಲು ಸಾಧ್ಯವಾಗುತ್ತದೆ. ಅಷ್ಟೇ ಅಲ್ಲದೇ, ವಿವಿಧ ಇಲಾಖೆಯ ವೃಂದಗಳಲ್ಲಿನ ವೇತನ ರಚನೆಯಲ್ಲಿನ ನ್ಯೂನ್ಯತೆಗಳು ಹಾಗೂ ಸರ್ಕಾರಿ ಇಲಾಖೆಗಳ ಕಾರ್ಯನಿರ್ವಹಣೆಯನ್ನು ಉತ್ತಮಗೊಳಿಸುವ ಬಗ್ಗೆ ಹಾಗೂ ಸರ್ಕಾರಿ ನೌಕರರುಗಳ ಕಾರ್ಯನಿರ್ವಹಣೆಯನ್ನು ಉತ್ತಮಗೊಳಿಸುವ ಸಂಬಂಧ ಶಿಫಾರಸ್ಸನ್ನು ಅಂತಿಮಗೊಳಿಸಲು ಹೆಚ್ಚಿನ ಕಾಲಾವಧಿಯ ಅಗತ್ಯವಿರುವುದರಿಂದ', 6ನೇ ರಾಜ್ಯ ವೇತನ ಆಯೋಗದ ಕಾಲಾವಧಿಯನ್ನು ವಿಸ್ತರಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಕರ್ನಾಟಕ 6ನೇ ರಾಜ್ಯ ವೇತನ ಆಯೋಗದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017,**
**ಬೆಂಗಳೂರು, ದಿನಾಂಕ 11ನೇ ಸೆಪ್ಟೆಂಬರ್ 2017.**

ಕರ್ನಾಟಕ 6ನೇ ರಾಜ್ಯ ವೇತನ ಆಯೋಗವು ತನ್ನ ಕಾರ್ಯಕಲಾಪಗಳನ್ನು ಪೂರ್ಣಗೊಳಿಸಲು ಮತ್ತು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಅನುಕೂಲವಾಗುವಂತೆ, 6ನೇ ರಾಜ್ಯ ವೇತನ ಆಯೋಗದ

ಕಾಲಾವಧಿಯನ್ನು ದಿನಾಂಕ: 31-01-2018ರವರೆಗೆ ಹಾಗೂ ದಿನಾಂಕ: 29-06-2017ರ ಆದೇಶದನ್ವಯ ಸೃಜಿಸಲಾದ ಎಲ್ಲಾ ಹುದ್ದೆಗಳ ಅವಧಿಯನ್ನು ದಿನಾಂಕ: 31-01-2018ರವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಿ.ಎಸ್.ಜೋಗೋಜೆ)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

BHC 11/9/17

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ಕಾರ್ಯದರ್ಶಿ,6ನೇ ರಾಜ್ಯ ವೇತನ ಆಯೋಗ, ಮೊದಲನೇ ಮಹಡಿ, ಕಾಫಿ ಬೋರ್ಡ್ ಬಿಲ್ಡಿಂಗ್, ಡಾ.ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು.
7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
11. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
12. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಇಲಾಖಾ ಮುಖ್ಯಾಧಿಕಾರಿಗಳು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಇತರ ಎಲ್ಲಾ ನೌಕರರ ನೋಂದಾಯಿತ ಸೇವಾ ಸಂಘಟನೆಗಳು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
25. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**